# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಕೌಶಲ್ಯ ತರಬೇತಿ ಯೋಜನೆಗಳ ಅನುಷ್ಠಾನ ಕುರಿತು ತರಬೇತಿ ಸಂಸ್ಥೆಗಳ/ಕೇಂದ್ರಗಳ/ಮೌಲ್ಯಮಾಪನ ಸಂಸ್ಥೆಗಳ ನೋಂದಣಿ ಮತ್ತು ಮಾನ್ಯತೆ ಕುರಿತು ಪರಿಷ್ಕೃತ ಮಾರ್ಗಸೂಚಿಗಳ ಬಗ್ಗೆ.

**ಓದಲಾಗಿದೆ:** ಸರ್ಕಾರಿ ಸುತ್ತೋಲೆ ಸಂಖ್ಯೆ: ಕೌಉಜೀಇ 51 ಕೌಗುಇ 2017 ದಿನಾಂಕ: 13.11.2018.

****

**<u>ಪ್ರಸ್ತಾವನೆ:</u>**

ಮೇಲೆ ಓದಲಾದ ತರಬೇತಿ ಸಂಸ್ಥೆಗಳು ಮತ್ತು ತರಬೇತಿ ಕೇಂದ್ರಗಳ ನೋಂದಣಿ ಮತ್ತು ಮಾನ್ಯತೆ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಲಾಗಿತ್ತು. ರಾಜ್ಯ ಕೌಶಲ್ಯ ತರಬೇತಿ ಯೋಜನೆಗಳ ಅನುಷ್ಠಾನ ಕುರಿತು ಮಾರ್ಗಸೂಚಿಗಳನ್ನು ತಯಾರಿಸಿ ನಿರ್ದೇಶಕರು ಕೌಶಲ್ಯ ಮಿಷನ್‌ರವರು ಕಳುಹಿಸಿದ್ದ ಪ್ರಯುಕ್ತ ರಾಜ್ಯ ಕೌಶಲ್ಯ ತರಬೇತಿ ಯೋಜನೆಗಳ ಅನುಷ್ಠಾನ ಕುರಿತು ತರಬೇತಿ ಸಂಸ್ಥೆಗಳ/ಕೇಂದ್ರಗಳ ನೋಂದಣಿ ಮತ್ತು ಮಾನ್ಯತೆ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಇವುಗಳ ಜೊತೆಗೆ ಮೌಲ್ಯಮಾಪನ ಸಂಸ್ಥೆಗಳ ನೋಂದಣಿ ಮತ್ತು ಮಾನ್ಯತೆ ಕುರಿತು ಮಾರ್ಗಸೂಚಿಗಳನ್ನು ಸೇರಿಸಿ ಸರ್ಕಾರವು ಪರಿಶೀಲಿಸಿ ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ : ಕೌಉಜೀಇ 51 ಕೌಗುಇ 2017, ಬೆಂಗಳೂರು ದಿನಾಂಕ: 01-02-2019</u>**

ಪ್ರಸ್ತಾವನೆಯಲ್ಲಿ ವಿವರಿಸಿದ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 51 ಕೌಗುಇ 2017, ದಿನಾಂಕ: 13-11-2018 ರಲ್ಲಿನ ಮಾರ್ಗಸೂಚಿಗಳನ್ನು, ರಾಜ್ಯ ಕೌಶಲ್ಯ ತರಬೇತಿ ಯೋಜನೆಗಳ ಅನುಷ್ಠಾನ ಕುರಿತು ತರಬೇತಿ ಸಂಸ್ಥೆಗಳ/ಕೇಂದ್ರಗಳ ನೋಂದಣಿ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಇವುಗಳ ಜೊತೆಗೆ ಮೌಲ್ಯಮಾಪನ ಸಂಸ್ಥೆಗಳ ನೋಂದಣಿ ಮತ್ತು ಮಾನ್ಯತೆ ಮಾರ್ಗಸೂಚಿಗಳನ್ನು ಸೇರಿಸಿ **ಅನುಬಂಧ**ದಲ್ಲಿ ಲಗತ್ತಿಸಿ ಅನುಷ್ಠಾನಗೊಳಿಸಲು ಆದೇಶಿಸಿದೆ. ಈ ಪರಿಷ್ಕೃತ ಮಾರ್ಗಸೂಚಿಗಳನ್ನು ಪಾಲಿಸಿ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯನ್ನು ಈ ತಕ್ಷಣದಿಂದ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಈರಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ

ಇವರಿಗೆ,

1. ಮಹಾಲೇಖಪಾಲಕರು, (ಎ&ಇ, ಜಿಎಸ್‌ಎಸ್‌ಎ, ಇ&ಆರ್‌ಎಸ್‌ಎ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು-29.
3. ಮಿಷನ್ ನಿರ್ದೇಶಕರು, ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಮಿಷನ್, ಬೆಂಗಳೂರು.
4. ನಿರ್ದೇಶಕರು, ಕೌಶಲ್ಯ ಮಿಷನ್ ಕೌಶಲ್ಯ ಭವನ ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮ ನಿಯಮಿತ, ಕೌಶಲ್ಯ ಭವನ, ಬೆಂಗಳೂರು.
6. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ. ಚಿಕ್ಕ ಗೋಪುರ, ಬೆಂಗಳೂರು.
7. ನಿರ್ದೇಶಕರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು-29.
8. ವ್ಯವಸ್ಥಾಪಕ ನಿರ್ದೇಶಕರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ರಾಜಾಜಿನಗರ, ಬೆಂಗಳೂರು.
9. ನಿರ್ದೇಶಕರು, ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ, ಧಾರವಾಡ.
10. ಮುಖ್ಯ ಕಾರ್ಯಾಚರಣ ಅಧಿಕಾರಿ, ಸಂಜೀವಿನಿ - ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಮಿಷನ್, ಬೆಂಗಳೂರು.
11. ಮುಖ್ಯ ಯೋಜನಾಧಿಕಾರಿಗಳು. ಡೇ-ನಲ್ಮ್, ಪೌರಾಡಳಿತ ನಿರ್ದೇಶನಾಲಯ, ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು.
12. ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು.
13. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯಿತಿಗಳು.
14. ಯೋಜನಾ ನಿರ್ದೇಶಕರು, ಡಿಆರ್‌ಡಿಎ, ಎಲ್ಲಾ ಜಿಲ್ಲಾ ಪಂಚಾಯಿತಿಗಳು.
15. ಉಪ ವಿಭಾಗಾಧಿಕಾರಿಗಳು, ಎಲ್ಲಾ ಜಿಲ್ಲೆಗಳು.
16. ಕಾರ್ಯನಿರ್ವಾಹಕಾಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯಿತಿಗಳು.
17. ಎಲ್ಲಾ ಜಿಲ್ಲೆಗಳ ಜಿಲ್ಲಾ ಕೌಶಲ್ಯ ಅಧಿಕಾರಿಗಳು.

ಪ್ರತಿಯನ್ನು ಮಾಹಿತಿಗಾಗಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
3. ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು.
4. ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.